ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ. DTE-ADMI0ACM2/96/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:18-10-2021.

**-:: ಸು ತ್ತೋಲೆ ::-**

**ವಿಷಯ:** 2021-22ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ) ಡಿಪ್ಲೋಮಾ ಪ್ರವೇಶ ಸಂಬಂಧ - ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ **ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.**

**ಉಲ್ಲೇಖ:**
1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:18-09-2021 & 01-10-2021.
2. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿಗಳು.

-OOOOOO-

2021-22ನೇ ಸಾಲಿನ ಹಗಲು ಪಾಳೀಯ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ) ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆಯಲು ದಿ:19-10-2021ರ ಒಳಗೆ ಪ್ರವೇಶ ಪಡೆಯಲು ಅವಧಿಯನ್ನು ವಿಸ್ತರಿಸಿ ಉಲ್ಲೇಖ(1)ರ ಪತ್ರಗಳಲ್ಲಿ ಅನುಮತಿ ನೀಡಲಾಗಿತ್ತು.

ಪ್ರವೇಶಾವಧಿಯನ್ನು ವಿಸ್ತರಿಸಲು ಸಂಬಂಧಪಟ್ಟ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಪ್ರಸ್ತುತ ಎಸ್‌ಎಸ್‌ಎಲ್‌ಸಿ ಮತ್ತು ಪಿ.ಯು.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಪ್ರವೇಶ ಪಡೆಯಲು ಅನುಕೂಲ ಮಾಡಿಕೊಡಲು ಪ್ರವೇಶ ಅವಧಿಯನ್ನು ವಿಸ್ತರಿಸಬೇಕೆಂದು ಕೋರಿ ಪ್ರಾಂಶುಪಾಲರುಗಳು ಸಲ್ಲಿಸಿರುವ ಉಲ್ಲೇಖ(2)ರಲ್ಲಿ ಮನವಿಗಳನ್ನು ಪರಿಶೀಲಿಸಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ)ನಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳಿಗೆ **ದಿ:30-10-2021 ರ ಒಳಗೆ ಪ್ರವೇಶ ಪಡೆಯಲು ಹಾಗೂ ಪ್ರವೇಶಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಪ್ರವೇಶಾವಧಿಯನ್ನು ವಿಸ್ತರಿಸಿ** ಅನುಮತಿ ನೀಡಲಾಗಿದೆ.

ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರವೇಶ ಪಡೆಯಲು ಕೊನೆಯ ಅವಕಾಶ ಆಗಿರುವುದರಿಂದ ಪುನಃ ಪ್ರವೇಶ ಅವಧಿಯನ್ನು ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. **ಪ್ರಥಮ ಸೆಮಿಸ್ಟರ್, ಮರುಪ್ರವೇಶ ಹಾಗೂ ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್‌ಗೆ ಪ್ರವೇಶ ಮಾಡಿಕೊಂಡಂತಹ ಅಭ್ಯರ್ಥಿಗಳ ವಿವರವನ್ನು http://dtetech.karnataka.gov.in/dteone/emp/Login.aspx ಲಿಂಕ್‌ನಲ್ಲಿ ಅಪ್-ಲೋಡ್ ಮಾಡಲು ಸೂಚಿಸಿದೆ.**

| ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ. |
|---|

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

*ರಾಜ್ಯದ ಸರ್ಕಾರಿ / ಅನುದಾನಿತ / - ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ*

ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ **ದಿ:30-10-2021ರ** ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು.

Scanned with CamScanner